# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 583 |
| ಸದಸ್ಯರ ಹೆಸರು | : | ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 20.02.2024 |
| ಉತ್ತರಿಸುವ ಸಚಿವರು | : | ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಮಾರುಕಟ್ಟೆಗಳಲ್ಲಿ ತೊಗರಿ ಬೆಲೆ ಕುಸಿತಗೊಂಡಿರುವುದರಿಂದ ರೈತರು ಕಂಗಾಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ಮಾರುಕಟ್ಟೆಯಲ್ಲಿ ಬೆಲೆ ಏರಿಳಿತ ನಿಯಂತ್ರಿಸಿ ರೈತರಿಗೆ ನೆರವಾಗಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು: (ವಿವರ ನೀಡುವುದು) | 2023-24ನೇ ಸಾಲಿನಲ್ಲಿ ಕೇಂದ್ರ ಸರ್ಕಾರವು ಎಫ್.ಎ.ಕ್ಯೂ ಗುಣಮಟ್ಟದ ತೊಗರಿ ಪ್ರತಿ ಕ್ವಿಂಟಾಲ್‌ಗೆ ರೂ.7,000/-ಗಳ ಬೆಂಬಲ ಬೆಲೆಯನ್ನು ಘೋಷಿಸಲಾಗಿದೆ. ಪ್ರಸ್ತುತ ರಾಜ್ಯದ ಪ್ರಮುಖ ಮಾರುಕಟ್ಟೆಗಳಲ್ಲಿ ತೊಗರಿಯ ಬೆಲೆ ಪ್ರತಿ ಕ್ವಿಂಟಾಲ್‌ಗೆ ಕನಿಷ್ಠ ರೂ.9,000/- ರಿಂದ ಗರಿಷ್ಠ ರೂ.10,730/- ಗಳ ಧಾರಣೆಯಲ್ಲಿ ಮಾರಾಟವಾಗುತ್ತಿದೆ. ಸದರಿ ಧಾರಣೆಯು ಬೆಂಬಲ ಬೆಲೆಗಿಂತ ಹೆಚ್ಚಾಗಿರುತ್ತದೆ.<br><br>ಕೇಂದ್ರ ಸರ್ಕಾರವು ಆಹಾರ ಭದ್ರತೆಗಾಗಿ ಹೆಚ್ಚುವರಿ ದಾಸ್ತಾನು ಮಾಡುವ ಉದ್ದೇಶದಿಂದ ಬೆಲೆ ಸ್ಥಿರೀಕರಣ ನಿಧಿ ಯೋಜನೆಯಡಿಯಲ್ಲಿ ತೊಗರಿಯನ್ನು ಮಾರುಕಟ್ಟೆ ದರದ ಆಧಾರದ ಮೇಲೆ ರಾಜ್ಯ ಮಟ್ಟದ ಖರೀದಿ ಸಂಸ್ಥೆಗಳಾದ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಂಡಳ ಮತ್ತು ದ್ವಿದಳ ಧಾನ್ಯ ಅಭಿವೃದ್ಧಿ ಮಂಡಳಿಯ ವತಿಯಿಂದ ಗ್ರಾಮೀಣ ಭಾಗದ ರೈತರಿಗೆ ಅನುಕೂಲವಾಗುವಂತೆ ಸಂಘಗಳು, ಹಾಗೂ ಎಫ್.ಪಿ.ಒ.ಗಳ ಮುಖಾಂತರ ಇ-ಸಮೃದ್ಧಿ ಪೋರ್ಟಲ್‌ನಲ್ಲಿ ನೊಂದಾಯಿಸಿಕೊಂಡ ರೈತರಿಂದ ನೇರವಾಗಿ ತೊಗರಿ ಖರೀದಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. |
| (ಆ) | ತೊಗರಿ ಬೆಳೆಯುವ ರೈತರಿಗೆ ಅನುಕೂಲವಾಗುವಂತೆ ಬೆಂಬಲ ಬೆಲೆ ಖರೀದಿ ಕೇಂದ್ರಗಳನ್ನು ತೆರೆಯಲು ಮತ್ತು ಕೃತಕ ದರ ಕುಸಿತ ಸೃಷ್ಟಿಸುವ ಕಾಳಸಂತೆ ಕೋರರನ್ನು ನಿಯಂತ್ರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು) | ರಾಜ್ಯದ ಮಾರುಕಟ್ಟೆಗಳಲ್ಲಿ ತೊಗರಿಯ ಬೆಲೆ ಬೆಂಬಲ ಬೆಲೆಗಿಂತ ಹೆಚ್ಚಿನ ಧಾರಣೆಯಲ್ಲಿ ಮಾರಾಟವಾಗುತ್ತಿದ್ದು, ಯಾವುದೇ ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿ ಸಭೆಯ ಶಿಫಾರಸ್ಸು ಸ್ವೀಕೃತವಾಗಿರುವುದಿಲ್ಲ. |

ಸಂಖ್ಯೆ: ಸಿಒ 50 ಎಂಆರ್‌ಇ 2024

(ಶಿವಾನಂದ ಎಸ್. ಪಾಟೀಲ)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ
ಹಾಗೂ ಕೃಷಿ ಮಾರುಕಟ್ಟೆ ಸಚಿವರು